## ಮುಖ್ಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಯಾದಗಿರಿ

## ಸಿ.ಸಿ. ನಂ. 749 / 2021

ಸಿಡಬ್ಲ್ಯೂ- 3
ಪಿಡಬ್ಲ್ಯೂ- 4

ದಿನಾಂಕಃ **21.08.2025.**

ಸಾಕ್ಷಿಗೆ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು

| | |
|---|---|
| ಸಾಕ್ಷಿಯ ಹೆಸರುಃ | - ಚಂದಪ್ಪ |
| ತಂದೆಯ ಹೆಸರುಃ | - ಬಸ್ಸಪ್ಪ |
| ವಯಸ್ಸುಃ | -? **54** ವರ್ಷ |
| ಉದ್ಯೋಗಃ | - ಒಕ್ಕಲುತನ. |
| ವಾಸಸ್ಥಳಃ | - ಶಿವನೂರು. |

ಮುಖ್ಯ ವಿಚಾರಣೆಃ ಸ.ಸ.ಅ. ರವರಿಂದಃ

ಪೊಲೀಸರು ಶಿವನೂರಿಗೆ ಬಂದಿದ್ದರು ನಾನು ಹೋಲಕ್ಕೆ ಹೋಗುವಾಗ ಪೊಲೀಸರು ನನ್ನನ್ನು ಕರೆದು ಸಹಿಯನ್ನು ಪಡೆದುಕೊಂಡಿದ್ದರು ಆವಾಗ ಅಲ್ಲಿ ಯಾರು ಇರಲಿಲ್ಲ. ಯಾವುದರ ಸಲುವಾಗಿ ನನ್ನ ಸಹಿಯನ್ನು ಪೊಲೀಸರು ಪಡೆದುಕೊಂಡಿದ್ದರು ಎಂದು ನನಗೆ ಗೊತ್ತಿರುವುದಿಲ್ಲ ಸಾಕ್ಷಿಯು ತಾನು ಸಹಿ ಮಾಡಿದ ದಾಖಲೆಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ 2 ಎಂದು ಗುರುತಿಸಲಾಗಿರುತ್ತದೆ. ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ 2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ತಾನು ಸಹಿ ಮಾಡಿದ ಇನ್ನೊಂದು ದಾಖಲೆಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯು ಕಚ್ಚಾ ನಕಾಶೆಯಾಗಿದ್ದು ಅದನ್ನು ನಿಪಿ 6 ಎಂದು ಗುರುತಿಸಲಾಯಿತು. ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ 6(ಬಿ) ಎಂದು ಗುರುತಿಸಲಾಯಿತು. ನಿಪಿ 2 ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ. ಸಾಕ್ಷಿಯು ಪೋಟೋಗಳಲ್ಲಿ ತಾನು ಇರುವುದನ್ನು ನೋಡಿ ಗುರುತಿಸಿರುತ್ತಾರೆ ಅವುಗಳನ್ನು ಈಗಾಗಲೇ ನಿಪಿ 3 ಎಂದು ಗುರುತಿಸಲಾಗಿರುತ್ತದೆ. ಪೊಲೀಸರು ನನ್ನ ಸಮಕ್ಷಮ ಜಪ್ತಿಪಂಚನಾಮೆಯನ್ನು ಮಾಡಿ ಯಾವುದೇ ವಸ್ತುಗಳನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲಕರ ಸಾಕ್ಷ್ಯವನ್ನು ನುಡಿದ ಕಾರಣ ಸ.ಸ.ಅಭಿಯೋಜಕರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. )

ಪಾಟೀ ಸವಾಲುಃ ಸ.ಸ.ಅ ರವರಿಂದಃ

ದಿನಾಂಕಃ 11.06.2021 ರಂದು ಬೆಳಗ್ಗೆ 9 ಗಂಟೆಯಿಂದ 10 ಗಂಟೆಯ ವರೇಗೆ ಬೆಣಕನಳ್ಳಿ ಗ್ರಾಮದ ಸೀಮೆಯ ಅಮೀನರೆಡ್ಡಿಗೌಡ ರವರ ಹೊಲದಲ್ಲಿ ಮನೆಯ ಮುಂದೆ ಪಂಚನಾಮೆಯನ್ನು ಮಾಡಿದ್ದರು ಎಂದರೆ ಸರಿಯಲ್ಲ. ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನಿಪಿ 2 ರಂತೆ ಪೊಲೀಸರು ಪಂಚನಾಮೆಯನ್ನು ಮಾಡಿ ಮುದ್ದೆ ಮಾಲು 1 ನ್ನು ಜಪ್ತಿಪಡಿಸಿಕೊಂಡಿದ್ದರು ಎಂದರೆ ಸರಿಯಲ್ಲ. ಅದೇ ರೀತಿ ನಿಪಿ 3 ನ್ನು ತೆಗೆದಿದ್ದರು ಎಂದರೆ ಸರಿಯಲ್ಲ. ಅದೇ ರೀತಿ ಆ ಕಾಲಕ್ಕೆ ನಿಪಿ 6 ನ್ನು ಪೊಲೀಸರು ತೆಗೆದಿದ್ದರು ಎಂದರೆ ಸರಿಯಲ್ಲ. ನಾನು ನಿಪಿ 2 ನ್ನು ತಯಾರಿಸಿಲು ಪೊಲೀಸರಿಗ ಸಹಕರಿಸಿದ್ದರು ಸಹ ಆರೋಪಿತನಿಗೆ ಸಹಾಯ ಮಾಡಲು ಪಂಚನಾಮೆಯನ್ನು ಮಾಡಿರುವುದಿಲ್ಲ ಎಂದು ಸುಳ್ಳು ಸಾಕ್ಷ್ಯಹೇಳಿರುತ್ತೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ.ಎಂ.ವಿ.ಕೆ. ರವರಿಂದಃ

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

ಮರು ವಿಚಾರಣೆಃ ಇಲ್ಲಃ

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚುಗಾರನಿಂದ ಬೆರಳಚ್ಚು ಮಾಡಿಸಲಾಯಿತು)

**ಓ. ಹೇ. ಕೇ. ಸರಿ ಅದೆ.**

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು,
ಯಾದಗಿರಿ.